**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ದಂಡಾಧಿಕಾರಿಗಳು,**
**ಹೆಗ್ಗಡದೇವನಕೋಟೆ.**

# O.S. No. 29/2018

| | | |
|---|---|---|
| ಸಾಕ್ಷಿದಾರರ ಹೆಸರು | : | ಲಕ್ಷ್ಮಿ ಎಂ. |
| ತಂದೆಯ ಹೆಸರು | : | ಮರಿಲಿಂಗನಾಯಕ |
| ವಯಸ್ಸು | : | 26 ವರ್ಷ |
| ಉದ್ಯೋಗ | : | ಗೃಹಿಣಿ |
| ವಾಸಸ್ಥಳ | : | ಮೈಸೂರು. |

**ಸಾಕ್ಷಿಯನ್ನು ದಿನಾಂಕಃ 17.03.2023 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ. ಸಿ.ಎಸ್.ಪಿ. ವಕೀಲರಿಂದಃ**

ನಾನು ಈ ಪ್ರಕರಣದಲ್ಲಿ ವಾದಿಯಾಗಿದ್ದು, ನನ್ನ ಮುಖ್ಯ ವಿಚಾರಣೆ ಬಾಬ್ತು ನನ್ನ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ಉಯ್ಯಂಬಳ್ಳಿ, ಬಿದರಹಳ್ಳಿ ಮತ್ತು ಸಾಗರೆ ಗ್ರಾಮಗಳಿಗೆ ಸಂಬಂಧಿಸಿದ ಸ.ನಂ. 31/1, 103/1, 619 ಮತ್ತು 658 ಕ್ಕೆ ಸಂಬಂಧಿಸಿದ 04 ಗಣಕೀಕೃತ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದೇನೆ. ಅವುಗಳನ್ನು ಕ್ರಮವಾಗಿ ನಿ.ಪಿ.-1 ರಿಂದ ನಿ.ಪಿ.-4 ಎಂದು ಗುರುತಿಸಲಾಯಿತು.

ಬಿದರಹಳ್ಳಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ನೀಡಿರುವ 03 ಕಂದಾಯ ರಸೀದಿ ಬಿಲ್ಲುಗಳನ್ನು ಹಾಜರುಪಡಿಸಿದ್ದೇನೆ. ಅವುಗಳನ್ನು ಕ್ರಮವಾಗಿ ನಿ.ಪಿ.-5 ರಿಂದ ನಿ.ಪಿ.-7 ಎಂದು ಗುರುತಿಸಲಾಯಿತು.

**O.S. No. 29/2018**
**ಪಿ..ಡಬ್ಲ್ಯು–01**

ನಮ್ಮ ವಕೀಲರ ಮೂಲಕ ಪ್ರತಿವಾದಿಗಳಿಗೆ ಕಳುಹಿಸಿದ ಲೀಗಲ್ ನೋಟೀಸಿನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.–8 ಎಂದು ಗುರುತಿಸಲಾಯಿತು.

ಪ್ರತಿವಾದಿಗಳು ತಮ್ಮ ವಕೀಲರ ಮೂಲಕ ಕಳುಹಿಸಿದ ಮರು ಉತ್ತರದ ನೋಟೀಸಿನ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.–9 ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ಮಾನ್ಯ ವಾದಿ ಪರ ವಕೀಲರು ಮುಂದಿನ ಮುಖ್ಯ ವಿಚಾರಣೆಗಾಗಿ ಸಮಯ ಕೋರಿರುತ್ತಾರೆ. ಸಮಯ ನೀಡಲಾಯಿತು.**

(**ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**)

**ಓ ಹೇ ಕೇ ಸಾ ಸ ಇ ಒ.,**

**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ಹೆಗ್ಗಡದೇವನಕೋಟೆ.**

**O.S. No. 29/2018**
ಪಿ..ಡಬ್ಲ್ಯು–01